ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಗೂಳೂರು ಬೆಟ್ಟದ ಬಳಿ 150 ಮೀ.ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1261 (1435) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ಕೆರೆಗೂಡು ಹೋಬಳಿ ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿ ಅಂದಾಜಿನಲ್ಲಿ ಗೂಳೂರು ಬೆಟ್ಟದ ಬಳಿ 150 ಮೀ. ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಸಂಬಂಧ ಸಮೀಕ್ಷಾ ಕಾರ್ಯ ಕೈಗೊಂಡು, ವಿನ್ಯಾಸ ಹಾಗೂ ಸಾಧ್ಯಸಾಧ್ಯತೆ ಬಗ್ಗೆ ಪರಿಶೀಲನೆ ನಡೆಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಸಮೀಕ್ಷಾ ಕಾರ್ಯ ಹಾಗೂ ಸಾಧ್ಯಸಾಧ್ಯತೆಯ ವರದಿಯ ಅಂಶಗಳೇನು ; (ವರದಿಯ ಪ್ರತಿ ಒದಗಿಸುವುದು)

(ಇ) ಸದರಿ ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು ; ಯಾವಾಗ ಪೂರ್ಣಗೊಳಿಸಲಾಗುವುದು ; ಕಾಮಗಾರಿ ಪೂರ್ಣಗೊಳಿಸಲು ಕಾಲಮಿತಿ ಹಾಕಿಕೊಳ್ಳಲಾಗಿದೆಯೇ ; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ;

(ಈ) ದುಸ್ಥಿತಿಯಲ್ಲಿರುವ ತೂಬುಗಳನ್ನು ದುರಸ್ಥಿಗೊಳಿಸಿ ಖಾಯಂ ತೂಬುಗಳನ್ನು ಅಳವಡಿಸಲಾ ಗಿದೆಯೇ ; ಹಾಗಿದ್ದಲ್ಲಿ, ಖಾಯಂ ತೂಬುಗಳನ್ನು ಎಲ್ಲೆಲ್ಲಿ ಅಳವಡಿಸಲಾಗಿದೆ ? (ವಿವರ ನೀಡುವುದು)